# ದೈಹಿಕ ಶಿಕ್ಷಕರ ಕಾರ್ಯಾಗಾರದಲ್ಲಿ ಹೊರಟ್ಟಿ

# ಬದ್ಧತೆಯಿಂದ ಯಶಸ್ಸು

KP



ಕಾಗಿನೆಲೆಯ ಕನಕ ಸಭಾಭವನದಲ್ಲಿ ಬೆಳಗಾವಿ ವಿಭಾಗಮಟ್ಟದ ಡ್ರೀಮ್ಸ್ ಒಲಿಂಪಿಕ್ಸ್ ದೈಹಿಕ ಶಿಕ್ಷಕರ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್. ಹೊರಟ್ಟಿ.

**ಹಾವೇರಿ:** ಸತತ ಪರಿಶ್ರಮ ಹಾಗೂ ಬದ್ಧತೆಯಿಂದ ಯಶಸ್ಸು ಸಾಧ್ಯ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಎಸ್. ಹೊರಟ್ಟಿ ಹೇಳಿದರು.

ಶನಿವಾರ ಕಾಗಿನೆಲೆಯ ಕನಕ ಸಭಾಭವನದಲ್ಲಿ ಬೆಳಗಾವಿ ವಿಭಾಗಮಟ್ಟದ ಡ್ರಿಮ್ಸ್ ಒಲಿಂಪಿಕ್ಸ್ ದೈಹಿಕ ಶಿಕ್ಷಕರ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು ಯಶಸ್ಸು ಒಂದೇ ದಿನದಲ್ಲಿ ಸಿಗಲು ಸಾಧ್ಯವಿಲ್ಲ. ಯಾವುದೇ ಸಾಧನೆಗೆ ಕಠಿಣ ಪರಿಶ್ರಮ ಬೇಕು ಎಂದು ಹೇಳಿದರು.

ಕಾರ್ಯಾಗಾರದ ಅಧ್ಯಕ್ಷತೆ ವಹಿಸಿದ್ದ ಬ್ಯಾಡಗಿ ಶಾಸಕರಾದ ವಿರೂಪಾಕ್ಷಪ್ಪ ರು ಬಳ್ಳಾರಿ ಅವರು ಮಾತನಾಡಿ, ಮಕ್ಕಳ ಆಟೋಟಗಳಲ್ಲಿ ಮಾತ್ರ ಅಲ್ಲದೆ ಮಾನಸಿಕವಾಗಿ ಹಾಗೂ ಶೈಕ್ಷಣಿಕವಾಗಿ ಸದೃಢಗೊಳಿಸಬೇಕು. ಈ ನಿಟ್ಟಿನಲ್ಲಿ ದೈಹಿಕ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಕ್ರೀಡಾಪಟುಗಳಿಗೆ ಸತತ ತರಬೇತಿ ನೀಡುವ ಮೂಲಕ ಮುಂದಿನ ಒಲಿಂಪಿಕ್ ಕ್ರೀಡೆಗಳಿಗೆ ತಯಾರಿ ಮಾಡುವಂತೆ ಎಲ್ಲಾ ದೈಹಿಕ ಶಿಕ್ಷಕರಿಗೆ ಮನವಿ ಮಾಡಿದರು.

ಡಯಟ್ ಉಪನಿರ್ದೇಶಕ ಜಿಡ್. ಎಂ. ಖಾಜಿ, ಕನಕ ಅಭಿವೃದ್ಧಿ ಪ್ರಾಧಿಕಾರ ಆಯುಕ್ತ ಮಲ್ಲೇಶಪ್ಪ ಹೊರಪೇಟೆ ಉಪಸ್ಥಿತರಿದ್ದರು.

# ಕಾಗಿನೆಲೆ ಗ್ರಾಪಂ ಅಧ್ಯಕ್ಷರ ಗುಡಿಸಲಿಗೆ ಹೊರಟ್ಟಿ

KP



ಬ್ಯಾಡಗಿ ತಾಲೂಕಿನ ಕಾಗಿನೆಲೆ ಗ್ರಾಮಕ್ಕೆ ಭೇಟಿ ಕೊಟ್ಟ ಸಂದರ್ಭದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಕಾಗಿನೆಲ್ಲಿ ಗ್ರಾಪಂ ಅಧ್ಯಕ್ಷೆ ಗುತ್ತೆವ್ವ ದುರಮುರಗಿ (ದುರುಮುರಗಿ ವೃತ್ತಿ) ಅವರ ಗುಡಿಸಲಿಗೆ ಭೇಟಿ ನೀಡಿ ಅಚ್ಚರಿ ಮೂಡಿಸಿದರು.

**ಬ್ಯಾಡಗಿ:** ತಾಲೂಕಿನ ಕಾಗಿನೆಲೆ ಗ್ರಾಮಕ್ಕೆ ಭೇಟಿ ಕೊಟ್ಟ ಸಂದರ್ಭದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾಗಿನೆಲೆ ಗ್ರಾಪಂ ಅಧ್ಯಕ್ಷೆ ಗುತ್ತೆವ್ವ ದುರಮುರಗಿ (ದುರುಮುರಗಿ ವೃತ್ತಿ) ಅವರ ಗುಡಿಸಲಿಗೆ ಭೇಟಿ ನೀಡಿ ಅಚ್ಚರಿ ಮೂಡಿಸಿದರು.

ಕಾಗಿನೆಲೆ ಗ್ರಾಪಂ 4ನೇ ವಾರ್ಡ್‌ನಿಂದ ಕಳೆದ ಚುನಾವಣೆಯಲ್ಲಿ ಜಯಗಳಿಸಿ ಮೀಸಲಾತಿಯ ಮೂಲಕ ಮೊದಲ ಬಾರಿಗೆ ಕಾಗಿನೆಲೆ ಗ್ರಾಪಂ ಅಧ್ಯಕ್ಷೆಯಾಗಿ ಆಯ್ಕೆಯಾಗಿದ್ದರು. ಇದು ದುರುಮುರಗಿ ಸಮುದಾಯಕ್ಕೆ ಮೊದಲ ಬಾರಿಗೆ ದಕ್ಕಿದ ಗೌರವವಾಗಿದೆ. ಈ ಕುರಿತಂತೆ ಮಾಹಿತಿ ಪಡೆದ ಸಭಾಪತಿ ಬಸವರಾಜ ಹೊರಟ್ಟಿ ಕಾಗಿನೆಲೆಯಿಂದ ತೆರಳುವ ಮಾರ್ಗಮಧ್ಯದಲ್ಲಿ ರಸ್ತೆ ಪಕ್ಕದಲ್ಲೇ ಇರುವ ಗ್ರಾಪಂ ಅಧ್ಯಕ್ಷೆ ಗುತ್ತೆವ್ವ ಗುಡಿಸಲಿಗೆ ಭೇಟಿ ಕೊಟ್ಟು ಅವರೊಂದಿಗೆ ಕೆಲ ಕಾಲ ಚರ್ಚೆ ನಡೆಸಿದರು. ನಂತರ ದುರಮುರಗಿ ವೃತ್ತಿಯ ಡೋಲನ್ನ ಬಾರಿಸುವಂತೆ ಕೇಳಿದಾಗ ಸಭಾಪತಿ ಮಾತಿನಂತೆ ಅಧ್ಯಕ್ಷೆ ಗುತ್ತೆವ್ವ ದುರಮುರಗಿ ವೃತ್ತಿ ಡೋಲನ್ನು ಬಾರಿಸಿದ್ದು ವಿಶೇಷವಾಗಿತ್ತು. ಅಲ್ಲಿಂದ ತೆರಳುವ ಸಂದರ್ಭದಲ್ಲಿ ಕಾಗಿನೆಲೆ ವ್ಯಾಪ್ತಿಯ ಗ್ರಾಪಂನಲ್ಲಿ ಉತ್ತಮ ಕಾರ್ಯ ನಿರ್ವಹಿಸುವಂತೆ ಅಧ್ಯಕ್ಷೆ ಗುತ್ತೆವ್ವಳಿಗೆ ಸೂಚನೆ ನೀಡಿದರು.

ಬೆಳಗಾಯಿತು

## ವಿಭಾಗ ಮಟ್ಟದ ದೈಹಿಕ ಶಿಕ್ಷಕರ ಕಾರ್ಯಾಗಾರ

# ಸತತ ಪರಿಶ್ರಮ ಹಾಗೂ ಬದ್ಧತೆಯಿಂದ ಯಶಸ್ಸು ಸಾಧ್ಯ



**ಬೆಳಗಾಯಿತು ವಾರ್ತೆ**

**ಹಾವೇರಿ:** ಸತತ ಪರಿಶ್ರಮ ಹಾಗೂ ಬದ್ಧತೆಯಿಂದ ಯಶಸ್ಸು ಸಾಧ್ಯ ಎಂದು ಕರ್ನಾಟಕ ವಿಧಾನ ಪರಿಷತ್ ಸಭಾಪತಿಗಳಾದ ಶ್ರೀ ಬಸವರಾಜ ಎಸ್ ಹೊರಟ್ಟಿ ಅವರು ಹೇಳಿದರು. ಶನಿವಾರ ಕಾಗಿನೆಲೆಯ ಕನಕ ಸಭಾಭವನದಲ್ಲಿ ಬೆಳಗಾವಿ ವಿಭಾಗ ಮಟ್ಟದ ಡ್ರಿಮ್ಸ್ ಒಲಂಪಿಕ್ಸ್ ದೈಹಿಕ ಶಿಕ್ಷಕರ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು ಯಶಸ್ಸು ಒಂದೇ ದಿನದಲ್ಲಿ ಸಿಗಲು ಸಾಧ್ಯವಿಲ್ಲ ಯಾವುದೇ ಸಾಧನೆಗೆ ಕಠಿಣ ಪರಿಶ್ರಮ ಬೇಕು ಎಂದು ಹೇಳಿದರು.

ಕಾರ್ಯಾಗಾರದ ಅಧ್ಯಕ್ಷತೆ ವಹಿಸಿದ್ದ ಬ್ಯಾಡಗಿ ಶಾಸಕರಾದ ವಿರುಪಾಕ್ಷಪ್ಪ ರು ಬಳ್ಳಾರಿ ಅವರು ಮಾತನಾಡಿ, ಮಕ್ಕಳ ಆಟೋಟಗಳಲ್ಲಿ ಮಾತ್ರ ಅಲ್ಲದೆ ಮಾನಸಿಕವಾಗಿ ಹಾಗೂ ಶೈಕ್ಷಣಿಕವಾಗಿ ಸದೃಢಗೊಳಿಸಬೇಕು. ಈ ನಿಟ್ಟಿನಲ್ಲಿ ದೈಹಿಕ ಶಿಕ್ಷಕರ ಪಾತ್ರ ಮಹತ್ವದ್ದಾಗಿದೆ. ಕ್ರೀಡಾ ಪಟುಗಳಿಗೆ ಸತತ ತರಬೇತಿ ನೀಡುವ ಮೂಲಕ ಮುಂದಿನ ಒಲಂಪಿಕ್ಸ್ ಕ್ರೀಡೆಗಳಿಗೆ ತಯಾರಿ ಮಾಡುವಂತೆ ಎಲ್ಲಾ ದೈಹಿಕ ಶಿಕ್ಷಕರಿಗೆ ಮನವಿ ಮಾಡಿದರು. ಡಯಟ್ ಉಪನಿರ್ದೇಶಕ ಜೆಡ್. ಎಂ. ಖಾಜಿ, ಕನಕ ಅಭಿವೃದ್ಧಿ ಪ್ರಾದಿಕಾರ ಆಯುಕ್ತ ಮಲ್ಲೇಶಪ್ಪ ಹೊರಪೇಟೆ ಇತರರು ಉಪಸ್ಥಿತರಿದ್ದರು.